KARNATAKA LEGISLATIVE ASSEMBLY

ಪತ್ರಿಕಾ ತುಣುಕುಗಳು
PAPER CLIPPINGS

DEPARTMENT / SUBJECT: ಕರ್ನಾಟಕ ವಿಧಾನ ಸಭೆ ಸಚಿವಾಲಯ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ    ದಿನಾಂಕ : DATE: 13/11/2019

# ಎಸ್. ಮೂರ್ತಿ ವಿರುದ್ಧದ ಇಲಾಖಾ ವಿಚಾರಣೆಗೆ ತಡೆ

**ವಿಕ ಸುದ್ದಿಲೋಕ** ಬೆಂಗಳೂರು

ವಿಧಾನಸಭೆ ಕಾರ್ಯದರ್ಶಿ ಹುದ್ದೆಯಿಂದ ಅಮಾನತುಗೊಂಡಿರುವ ಎಸ್. ಮೂರ್ತಿ ವಿರುದ್ಧದ ಆರೋಪಪಟ್ಟಿ ಹಾಗೂ ಇಲಾಖಾ ವಿಚಾರಣೆಗೆ ಹೈಕೋರ್ಟ್ ಮಂಗಳವಾರ ಮಧ್ಯಂತರ ತಡೆಯಾಜ್ಞೆ ನೀಡಿದೆ.

ಪ್ರಕರಣದ ಸಂಬಂಧ ತಮ್ಮ ವಿರುದ್ಧದ ಆರೋಪಪಟ್ಟಿ ಹಾಗೂ ಇಲಾಖಾ ವಿಚಾರಣೆ ರದ್ದುಗೊಳಿಸಬೇಕೆಂದು ಕೋರಿ ಎಸ್. ಮೂರ್ತಿ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾ. ಕೃಷ್ಣ ದೀಕ್ಷಿತ್ ಅವರಿದ್ದ ಏಕಸದಸ್ಯಪೀಠ ಮಂಗಳವಾರ ಈ ಆದೇಶ ನೀಡಿದೆ.

ವಿಧಾನಸಭೆ ಕಾರ್ಯದರ್ಶಿಯಾಗಿದ್ದ ಎಸ್. ಮೂರ್ತಿಯನ್ನು ವಿಧಾನಸಭೆ ಸ್ಪೀಕರ್ ಶಿಫಾರಸಿನಂತೆ ಸೇವೆಯಿಂದ ಅಮಾನತುಗೊಳಿಸಿ ವಿಧಾನಸಭೆ ಅಧೀನ ಕಾರ್ಯದರ್ಶಿ 2018ರ ಡಿ. 27ರಂದು ಆದೇಶ ಹೊರಡಿಸಿದ್ದರು.

2016 ಹಾಗೂ 2017ನೇ ಸಾಲಿನಲ್ಲಿ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆದ ಅಧಿವೇಶನ ಸಂಬಂಧ ಕೈಗೊಳ್ಳಲಾದ ಕಾಮಗಾರಿ ಹಾಗೂ ಇತರ ಖರ್ಚು ವೆಚ್ಚಗಳಲ್ಲಿ ಅವ್ಯವಹಾರ ನಡೆಸಲಾಗಿದೆ ಎಂಬ ಆರೋಪ ಕುರಿತು ಮೂರ್ತಿ ವಿರುದ್ಧ ಕ್ರಮ ಕೈಗೊಳ್ಳಲಾಗಿತ್ತು.

2